ಅ) ಹಾಗಿದ್ದಲ್ಲಿ ಚುನಾವಣೆ ನಡೆಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ನಾಗಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) :

ಅ) ಹೌದು.

ಆ) ಚಿಕ್ಕನಾಯಕನಹಳ್ಳಿ ಹಾಗೂ ಹುಳಿಯಾರು ಮಾರುಕಟ್ಟೆ ಸಮಿತಿಯನ್ನು ಸಂಯೋಜನೆ ಮಾಡಿ ಸಂಯೋಜಿತ ಸಮಿತಿಗೆ ಸದಸ್ಯರನ್ನು ನಾಮಕರಣ ಮಾಡುವ ಪ್ರಸ್ತಾವವು ಸರ್ಕಾರದ ಪರಿಶೀಲನೆಯಲ್ಲಿರುವುದರಿಂದ ಈ ಮಾರುಕಟ್ಟೆ ಸಮಿತಿಗಳಿಗೆ ಚುನಾವಣೆ ನಡೆಸುವ ಪ್ರಕ್ರಿಯೆಯಿಂದ ಹೊರತುಪಡಿಸಲಾಗಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕೆಲವು ಅಧಿಕಾರಿಗಳು ಪೊರ್ಜರಿ ದಾಖಲಾತಿಗಳನ್ನು ನೀಡಿ ಕಾರ್ಯ ನಿರ್ವಹಿಸುತ್ತಿರುವುದು

1665 - ಶ್ರೀ ಟಿ.ಬಿ. ಜಯಚಂದ್ರ (ಕಳ್ಳಂಬೆಳ್ಳ) : ಮಾನ್ಯ ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಕೆಲವು ಅಧಿಕಾರಿಗಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಪೋರ್ಜರಿ ದಾಖಲಾತಿಗಳನ್ನು ನೀಡಿ ಸರ್ಕಾರಿ ಕೆಲಸ ನಿರ್ವಹಿಸುತ್ತಿರುವುದರ ಬಗ್ಗೆ ಸಿ.ಆರ್.ಇ. ಸೆಲ್‌ನಿಂದ ವರದಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

2. ಹಾಗಿದ್ದರೆ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕಾನೂನು ಕ್ರಮವೇನು?

ಶ್ರೀಮತಿ ವಿಮಲಾಬಾಯಿ ಜಗದೇವರಾವ್ ದೇಶ್‌ಮುಖ್ (ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ರಾಜ್ಯ ಸಚಿವರು) :

1. ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡದ ಪೋರ್ಜರಿ ದಾಖಲಾತಿಗಳನ್ನು ನೀಡಿ ಸರ್ಕಾರಿ ಸೇವೆಗೆ ಸೇರಿರುವ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಆದರೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಜಾತಿ ಬಗ್ಗೆ ಸುಳ್ಳು ದಾಖಲಾತಿಗಳನ್ನು ನೀಡಿ ರಾಜ್ಯ ಸರ್ಕಾರಿ ಸೇವೆಗೆ ಸೇರಿರುವ ಬಗ್ಗೆ ಸಿ.ಆರ್.ಇ. ಸೆಲ್‌ನಿಂದ ವರದಿಗಳು ಬಂದಿವೆ.

2. ಸಿ.ಆರ್.ಇ. ಸೆಲ್‌ನಿಂದ ಬಂದಿರುವ ವರದಿಗಳನ್ನು ಪರಿಶೀಲಿಸಲಾಗುತ್ತಿದೆ. ತಪ್ಪಿತಸ್ಥರೆಂದು ಕಂಡುಬರುವ ಅಧಿಕಾರಿ/ನೌಕರರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

ಮಂಗಳೂರು ಮರಕಡ ಬಡಾವಣೆಯಲ್ಲಿ ಗೃಹಮಂಡಳಿಯ ಮನೆಗಳು

1670 - ಶ್ರೀ ಕುಂಬೈ ಸುಂದರರಾವ್ (ಸುರತ್ಕಲ್) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?